ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ.3708/2022

ಸಿ.ಡಬ್ಲ್ಯೂ -5
ಪಿ.ಡಬ್ಲ್ಯೂ-5

ಸಾಕ್ಷಿದಾರನ ಹೆಸರು :- ಯೋಗಿಶ್
ತಂದೆಯ ಹೆಸರು :- ನಾಗಯ್ಯ
ವಯಸ್ಸು :- 33 ವರ್ಷ
ಉದ್ಯೋಗ :- ವ್ಯವಸಾಯ
ವಾಸ :- ಚಲಮಸಂದ್ರ

**ಸಾಕ್ಷಿಗೆ ದಿಃ 03.06.2026 ರಂದು ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ನನಗೆ ಪ್ರಕರಣದ ಬಗ್ಗೆ ಏನು ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಿಲಾಗಿದೆ. )**

**ಪಾಟೀ ಸವಾಲುಃ ಸಹಾಯಕ ಅಭಿಯೋಜಕರಿಂದಃ**

ದಿಃ 18.02.2022 ರಂದು ನಾನು ಮತ್ತು ಚಾ.ಸಾ.4 ರವರು ಅಶೋಕರವರ ಅಂಗಡಿ ಹತ್ತಿರ ಕುಳಿತುಕೊಂಡಿದ್ದು ಬೆಳಗ್ಗೆ ಸುಮಾರು 8.30ರ ಸಮಯದಲ್ಲಿ ಅಂಗಡಿಯ ಮನೆಯ ಮುಂದಿನ ಆರೋಪಿತರು ಅವರ ಮನೆಯ ಹತ್ತಿರ ಕೆಲಸ ಮಾಡುತ್ತಿದ್ದರು. ಆಗ ಚಾ.ಸಾ.2ರವರು ನಾವು ಮನೆ ಕಟ್ಟುವಾಗ ಮನೆಯ ಮುಂದಿನ ರಸ್ತೆಗೆ ಪ್ಯಾಸೇಜ್ ಬಿಟ್ಟು ಮನೆ ಕಟ್ಟಿಕೊಂಡಿದ್ದೇವೆ ನೀವು ಹಾಗೆ ಕಟ್ಟಿಕೊಳ್ಳಿ ಎಂದಿದ್ದಕ್ಕೆ ಆರೋಪಿತರು ಚಾ.ಸಾ.2ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಎಳೆದಾಡಿ ಕೈಗಳಿಂದ ಮೈ ಕೈಗೆ ಹೊಡೆದು ಕಾಲಿನಿಂದ ತುಳಿದಿರುತ್ತಾರೆ ಎಂದರೆ ಸರಿಯಲ್ಲ. 2ನೇ ಆರೋಪಿ ಅಲ್ಲೇ ಬಿದಿದ್ದ ದೊಣ್ಣೆಯಿಂದ

ಚಾ.ಸಾ.2ರವರ ತಲೆಗೆ ಹೊಡೆದಿದ್ದು ಪ್ರಾಣಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ನಾನು ಮತ್ತು ಚಾ.ಸಾ.3 ಮತ್ತು ಚಾ.ಸಾ.4 ರವರು ಜಗಳ ಬಿಡಿಸಿ ಕಳುಹಿಸಿರುತ್ತೇವೆ ಎಂದರೆ ಸರಿಯಲ್ಲ. ದಿಃ 10.03.2022 ರಂದು ನಾನು ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಒಪ್ಪಿ ಕೊಳ್ಳದ ಹೇಳಿಕೆಯನ್ನು ನಿ.ಪಿ.4 ಎಂದು ಗುರುತಿಸಲಾಯಿತು. ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.**

**ಮರು ವಿಚಾರಣೆ ಇಲ್ಲಃ**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.